**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ,**
**ದೊಡ್ಡಬಳ್ಳಾಪುರ**

**ಸಿ ಸಿ ನಂ : 523/2015**

**ಪಿ ಡಬ್ಲ್ಯೂ - 1**
**ಸಿ ಡಬ್ಲ್ಯೂ - 3**

**ದಿಃ 09.09.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಹೆಸರು ಃ ಹರೀಶ**
**ತಂದೆಯ ಹೆಸರು ಃ ರಂಗಪ್ಪ**
**ವಯಸ್ಸು ಃ 42 ವರ್ಷ**
**ಉದ್ಯೋಗ ಃ ವ್ಯವಸಾಯ**
**ವಿಳಾಸ ಃ ಚಿಕ್ಕನಹಳ್ಳಿ, ದೊಡ್ಡಬಳ್ಳಾಪುರ**

**ಮುಖ್ಯ ವಿಚಾರಣೆ ಃ ಸ ಸ ಅ ರವರಿಂದ**

ಸಾಕ್ಷಿಯು ಪಂಚನಾಮೆಯಲ್ಲಿನ ತಮ್ಮ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-1 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ಕ್ಕೆ ಸಹಿಯನ್ನು ನಾನು ಸುಮಾರು 10 ವರ್ಷಗಳ ಹಿಂದೆ ಮಾಡಿರುತ್ತೇನೆ. ನಿಪಿ-1 ಕ್ಕೆ ಪೋಲೀಸರು ಹೇಳಿದ ಮೇರೆಗೆ ಸಹಿ ಮಾಡಿರುತ್ತೇನೆ. ಪೋಲೀಸರು ನನ್ನ ಮುಂದೆ ಮಹಜರ್ ಮಾಡಿರುವುದಿಲ್ಲ ಹಾಗೂ ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ನಿಪಿ-1 ರಲ್ಲಿನ ವಿಚಾರಗಳು ಗೊತ್ತಿಲ್ಲ.

**(ಈ ಹಂತದಲ್ಲಿ ಸ ಸ ಅ ರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಸ ಸ ಅ ರವರಿಂದಃ**

ದಿಃ 04.02.02015 ರಂದು ಮಧ್ಯಾಹ್ನ 1-30 ರಿಂದ 2-00 ಗಂಟೆಯ ನಡುವೆ ಚಾಸಾ-2 ರವರ ಮನೆಯ ಹತ್ತಿರ ಪೋಲೀಸರು ಚಾಸಾ-1 ರವರು ತೋರಿಸಿದ ಕೃತ್ಯ ನಡೆದ ಸ್ಥಳದ ಪಂಚನಾಮೆಯನ್ನು ನನ್ನ ಮುಂದೆ ಮಾಡಿ ನಿಪಿ-1 ರಲ್ಲಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಚಾಸಾ-1 ಹಾಜರುಪಡಿಸಿದ ಮು.ಮಾಲು ದೊಣ್ಣೆಯನ್ನು ಪೋಲೀಸರು ಅಮಾನುತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ. ನಿಪಿ-1 ರಲ್ಲಿನ ವಿಚಾರಗಳು ಗೊತ್ತಿದ್ದರೂ ಆರೋಪಿತರಿಗೆ

ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಇಲ್ಲ ಎಂದು ನುಡಿದಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಂದ ಕಂಪ್ಯೂಟರನಲ್ಲಿ ಮಾಡಿಸಲಾಯಿತು)**

**ಓ ಹೇ ಕೇ ಸ ಅದೆ**

**ಅಪರ ಸಿವಿಲ್ ನ್ಯಾ. ಮತ್ತು**
**ಜೆ.ಎಂ.ಎಫ್.ಸಿ, ದೊಡ್ಡಬಳ್ಳಾಪುರ**